ಆಗಬೇಕೆಂದು ಹೇಳುತ್ತೇನೆ. ತಮ್ಮ ಕಳಕಳಿ ಹಾಗೂ ನಮ್ಮ ಕಳಕಳಿ ಒಂದೇ ಇದೆ. ನಮಗೆ ಬದುಕುವುದಕ್ಕೆ ಒಂದು ಅವಕಾಶ ಕೊಡಿ ಎಂದು ಹೇಳುತ್ತಾ ನಾನು ನನ್ನ ಮಾತನ್ನು ಮುಗಿಸುತ್ತೇನೆ.

ಅಧ್ಯಕ್ಷರು: ಸುಬ್ಬಾರೆಡ್ಡಿ ಮಾತನಾಡಿ. ನೀವು ಹೇಳಿದ್ದನ್ನೇ ಹೇಳಬೇಡಿ, ಬೇರೆ ಏನಾದರೂ ವಿಷಯ ಇದ್ದರೆ ಹೇಳಿ.

ಶ್ರೀ ಎಸ್.ಎನ್. ಸುಬ್ಬಾರೆಡ್ಡಿ (ಬಾಗೇಪಲ್ಲಿ): ಮಾನ್ಯ ಅಧ್ಯಕ್ಷರೆ, ನನ್ನ ಕ್ಷೇತ್ರಕ್ಕೆ ಸಂಬಂಧಪಟ್ಟಂತೆ ಮಾತ್ರ ಹೇಳುತ್ತೇನೆ. ನನಗೆ ಬೇಡಿಕೆಗಳ ಮೇಲೆ ಚರ್ಚೆ ಮಾಡುವುದಕ್ಕೆ ಅವಕಾಶ ಕೊಟ್ಟಂತಹ ತಮಗೆ ಧನ್ಯವಾದಗಳನ್ನು ಅರ್ಪಿಸುತ್ತೇನೆ.

ಅಧ್ಯಕ್ಷರು: ಒಂದು ಪ್ರಕಟಣೆ ಇದೆ, ಅದನ್ನು ಓದುತ್ತೇನೆ.

ಪ್ರಕಟಣೆ

ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಬಂದಿರುವ ಸಂದೇಶದಲ್ಲಿ ಕರ್ನಾಟಕ ವಿಧಾನಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 118ರ ಮೇರೆಗೆ, ದಿನಾಂಕ : 22.07.2015 ರಂದು ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿದ್ದ ಹಾಗೂ ವಿಧಾನ ಪರಿಷತ್ತಿನಿಂದ ತಿರಸ್ಕೃತಗೊಂಡು ಪುನಃ ಎರಡನೇ ಬಾರಿ ವಿಧಾನಸಭೆಯಿಂದ ಅಂಗೀಕೃತಗೊಂಡ ರೂಪದಲ್ಲಿರುವ 2015ನೇ ಸಾಲಿನ ಕರ್ನಾಟಕ ನಗರಪಾಲಿಕೆಗಳ (ತಿದ್ದುಪಡಿ) ವಿಧೇಯಕವನ್ನು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಲಾಗಿದೆಯೆಂದು ತಿಳಿಸಿರುತ್ತಾರೆ.

ಶ್ರೀ ಎಸ್.ಎನ್. ಸುಬ್ಬಾರೆಡ್ಡಿ: ನನ್ನ ಬಾಗೇಪಲ್ಲಿ ಕ್ಷೇತ್ರದಲ್ಲಿ ಅತಿಯಾಗಿ ಕುಡಿಯುವ ನೀರಿನ ಸಮಸ್ಯೆ, ಶಿಕ್ಷಕರ ಸಮಸ್ಯೆ ಮತ್ತು ಡಾಕ್ಟರ ಸಮಸ್ಯೆ ಇದೆ.